# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2020ನೇ ಸಾಲಿನ ಅವಧಿಗೆ ಗಳಿಕೆ ರಜೆಯನ್ನು ಅಧ್ಯರ್ಪಿಸಿ ನಗದೀಕರಣ ಪಡೆಯುವ ಸೌಲಭ್ಯವನ್ನು ನಿಯತಗೊಳಿಸುವ ಬಗ್ಗೆ.

**ಓದಲಾಗಿದೆ:** ಸರ್ಕಾರಿ ಆದೇಶ ಸಂಖ್ಯೆ: ಆಇ 5 ಸೇನಿಸೇ 2012, ದಿನಾಂಕ:14.06.2012.

**ಪ್ರಸ್ತಾವನೆ:**

ಮೇಲೆ ಓದಲಾದ ಆದೇಶದಲ್ಲಿ ಕರ್ನಾಟಕ ನಾಗರೀಕ ಸೇವಾ ನಿಯಮಗಳ ನಿಯಮ 118(2)ರ ಸೌಲಭ್ಯ ಪಡೆಯುವ ಸಲುವಾಗಿ, ಪ್ರತೀ ಕ್ಯಾಲೆಂಡರ್ ವರ್ಷದಲ್ಲಿ (ಆಯಾ ವರ್ಷದ ಜನವರಿ 1ರಿಂದ ಡಿಸೆಂಬರ್ 31ರ ಒಳಗೆ) 15 ದಿನಗಳಿಗೆ ಮೀರದ ಗಳಿಕೆ ರಜೆಯನ್ನು ಅಧ್ಯರ್ಪಿಸಿ, ರಜಾ ವೇತನಕ್ಕೆ ಸಮನಾದ ನಗದೀಕರಣ ಪಡೆಯಬಹುದಾದ ಸೌಲಭ್ಯವನ್ನು ದಿನಾಂಕ:01.01.2013ರಿಂದ ಜಾರಿಗೊಳಿಸಲಾಗಿದೆ.

2020ನೇ ಸಾಲಿನ ಅವಧಿಗೆ ಗಳಿಕೆ ರಜೆಯನ್ನು ಅಧ್ಯರ್ಪಿಸಿ ನಗದೀಕರಣ ಪಡೆಯುವ ಸೌಲಭ್ಯವನ್ನು ನಿಯತಗೊಳಿಸುವುದು ಅವಶ್ಯಕವೆಂದು ಸರ್ಕಾರವು ಈ ಬಗ್ಗೆ ಪರಿಶೀಲಿಸಿ ಕೆಳಗಿನಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಆಇ 4(ಇ) ಸೇನಿಸೇ 2019 ಬೆಂಗಳೂರು, ದಿನಾಂಕ:13.12.2019**

2020ನೇ ಸಾಲಿನ ಅವಧಿಗೆ ಗರಿಷ್ಠ 15 ದಿನಗಳಿಗೆ ಮೀರದ ಗಳಿಕೆ ರಜೆಯನ್ನು ಅಧ್ಯರ್ಪಿಸಿ ರಜಾ ವೇತನಕ್ಕೆ ಸಮನಾದ ನಗದೀಕರಣ ಸೌಲಭ್ಯ ಪಡೆಯುವ ಯೋಜನೆಯನ್ನು ದಿನಾಂಕ:01.01.2020 ರಿಂದ ಜಾರಿಗೊಳಿಸಿ ಈ ಕೆಳಕಂಡಂತೆ ನಿಯತಗೊಳಿಸಲಾಗಿದೆ.

| ಕ್ರಮ ಸಂಖ್ಯೆ | ಅಧಿಕಾರಿ / ನೌಕರರ ಸಮೂಹ | ಮುಂಚಿತವಾಗಿ ಒಂದು ತಿಂಗಳ ನೋಟಿಸ್ ನೀಡಿ 2020 ನೇ ಸಾಲಿನ ಅವಧಿಗೆ ನಗದೀಕರಣ ಸೌಲಭ್ಯ ಪಡೆಯುವ ಅವಧಿ |
|---|---|---|
| 1 | ಗ್ರೂಪ್ 'ಡಿ' ಸಮೂಹ | ಅವರ ಇಚ್ಛೆಯಂತೆ 2020ರ ಕ್ಯಾಲೆಂಡರ್ ವರ್ಷದ ಯಾವುದೇ ತಿಂಗಳಿನಲ್ಲಿ. |
| 2 | ಉಳಿದ ಸಮೂಹ (ಎ, ಬಿ, ಸಿ,) | ಅವರ ಇಚ್ಛೆಯಂತೆ ಏಪ್ರಿಲ್ 2020ರಿಂದ ಡಿಸೆಂಬರ್ 2020ರ ವರೆಗಿನ ಯಾವುದೇ ತಿಂಗಳಿನಲ್ಲಿ. |

2. ಮೇಲೆ ವಿಧಿಸಿದ ನಿಬಂಧನೆಯು ಏನೇ ಇದ್ದಾಗ್ಯೂ ಜನವರಿ 2020 ರಿಂದ ಮಾರ್ಚ್ 2020 ರಲ್ಲಿ ನಿವೃತ್ತಿ ಹೊಂದುವ ಎಲ್ಲಾ ಅರ್ಹ ನೌಕರರು/ಅಧಿಕಾರಿಗಳು, ಅವರು ನಿವೃತ್ತಿ ಹೊಂದುವ ತಿಂಗಳಲ್ಲಿ ನಗದೀಕರಣ ಪ್ರಯೋಜನ ಪಡೆಯಲು ಅರ್ಹರಾಗಿರುತ್ತಾರೆ.

3. ಗೆಜಿಟೆಡ್ ಅಧಿಕಾರಿಗಳ ಸಂಬಂಧದಲ್ಲಿ 2020ನೇ ಸಾಲಿನ ಗಳಿಕೆ ರಜೆ ನಗದೀಕರಣ ಸೌಲಭ್ಯ ಮಂಜೂರಾತಿ ಉದ್ದೇಶಕ್ಕಾಗಿ ಮಾತ್ರ, ಹೆಚ್‌ಆರ್‌ಎಂಎಸ್ ನಲ್ಲಿ ಲಭ್ಯವಿರುವ ಅಧಿಕಾರಿಗಳ ಗಳಿಕೆ ರಜೆ ಲೆಕ್ಕಾಚಾರದ ಆಧಾರದ ಮೇಲೆ ನಗದೀಕರಣವನ್ನು ಮಂಜೂರು ಮಾಡಲು ಸಕ್ಷಮ ರಜೆ ಮಂಜೂರಾತಿ ಪ್ರಾಧಿಕಾರಿಗಳು ಕ್ರಮ ವಹಿಸತಕ್ಕದ್ದು ಮತ್ತು ಮಹಾಲೇಖಪಾಲರು ಲೆಕ್ಕಾಚಾರದ ಬಗ್ಗೆ ಯಾವುದೇ ವ್ಯತ್ಯಾಸವನ್ನು ತಿಳಿಸಿದಲ್ಲಿ ಅದನ್ನು ಸರಿಪಡಿಸುವ ಮತ್ತು ಅದರನ್ವಯದ ಆರ್ಥಿಕ ಸೌಲಭ್ಯಗಳಿಗೆ ಮಾತ್ರ ಅರ್ಹವಾಗುವ ಷರತ್ತಿಗೊಳಪಡಿಸಿ ಮಂಜೂರು ಮಾಡತಕ್ಕದು.

4. ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ ನಿಯಮ 118 ರಲ್ಲಿ ನಿಯಮಿಸಿರುವಂತಹ ಗಳಿಕೆ ರಜೆ ನಗದೀಕರಣ ನಿಯಂತ್ರಣಕ್ಕೆ ಸಂಬಂಧಿಸಿದ ಇತರೆ ಷರತ್ತುಗಳು ಅನ್ವಯವಾಗುತ್ತದೆ.

...ಪುಟ_2ಕ್ಕೆ

5. ಈ ಆದೇಶವು ಈಗಾಗಲೇ ಈ ಸೌಲಭ್ಯ ವಿಸ್ತರಣೆಯಾಗಿರುವ ಸರ್ಕಾರದಿಂದ ಸಹಾಯಾನುದಾನ ಪಡೆಯುತ್ತಿರುವ ಸಂಸ್ಥೆಗಳ ನೌಕರರಿಗೂ ಅನ್ವಯಿಸುತ್ತದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

Suvarna B S

(ಬಿ.ಎಸ್.ಸುವರ್ಣ),
ಸರ್ಕಾರದ ಅಧೀನ ಕಾರ್ಯದರ್ಶಿ,
ಆರ್ಥಿಕ ಇಲಾಖೆ (ಸೇವೆಗಳು-1).

**ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು, ಮುಂದಿನ ರಾಜ್ಯಪತ್ರದಲ್ಲಿ ಪ್ರಕಟಿಸುವುದಕ್ಕಾಗಿ ಹಾಗೂ 50 ಪ್ರತಿಗಳನ್ನು ಆರ್ಥಿಕ ಇಲಾಖೆಗೆ ಸರಬರಾಜು ಮಾಡಲು ಕೋರಿ ಕಳುಹಿಸಿದೆ.**

ಪ್ರತಿ:

1. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು/ಅಪರಮುಖ್ಯ ಕಾರ್ಯದರ್ಶಿಗಳು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
3. ಎಲ್ಲಾ ಇಲಾಖಾ ಮುಖ್ಯಸ್ಥರುಗಳಿಗೆ.
4. ಎಲ್ಲಾ ಜಿಲ್ಲಾಧಿಕಾರಿಗಳು.
5. ಪ್ರಾದೇಶಿಕ ಆಯುಕ್ತರು, ಬೆಂಗಳೂರು/ಮೈಸೂರು/ಬೆಳಗಾವಿ/ಗುಲ್ಬರ್ಗ.
6. ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
7. ಪ್ರಧಾನ ಮಹಾಲೇಖಪಾಲರು (ಜಿ & ಎಸ್‌ಎಸ್‌ಎ), ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಪೋಸ್ಟ್.ಬಾಕ್ಸ್ ಸಂಖ್ಯೆ-5398, ಬೆಂಗಳೂರು-560001
8. ಮಹಾಲೇಖಪಾಲರು (ಇ & ಆರ್‌ಎಸ್‌ಎ). ಕರ್ನಾಟಕ ಹೊಸ ಕಟ್ಟಡ, "ಆಡಿಟ್ ಭವನ", ಪೋಸ್ಟ್.ಬಾಕ್ಸ್ ಸಂಖ್ಯೆ-5398, ಬೆಂಗಳೂರು-560001
9. ಮಹಾಲೇಖಪಾಲರು (ಎ & ಇ), ಕರ್ನಾಟಕ, ಪೋಸ್ಟ್.ಬಾಕ್ಸ್ ಸಂಖ್ಯೆ-5329/5369, ಪಾರ್ಕ್ ಹೌಸ್ ರೋಡ್, ಬೆಂಗಳೂರು.
10. ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಉಚ್ಚನ್ಯಾಯಾಲಯ, ಬೆಂಗಳೂರು.
11. ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
12. ರಿಜಿಸ್ಟ್ರಾರ್, ಕರ್ನಾಟಕ ಆಡಳಿತ ನ್ಯಾಯಮಂಡಳಿ, ಕಂದಾಯ ಭವನ, ಬೆಂಗಳೂರು.
13. ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು.
14. ಕಾರ್ಯದರ್ಶಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ವಿಧಾನಸೌಧ, ಬೆಂಗಳೂರು.
15. ಕಾರ್ಯದರ್ಶಿ, ಕರ್ನಾಟಕ ವಿಧಾನಸಭೆ/ವಿಧಾನ ಪರಿಷತ್ತು, ಬೆಂಗಳೂರು.
16. ಖಜಾನೆ ಅಧಿಕಾರಿ, ರಾಜ್ಯ ಹುಜೂರು ಖಜಾನೆ/ಜಿಲ್ಲಾ ಖಜಾನೆಗಳು.
17. ನಿರ್ದೇಶಕರು, ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ, ವಿಕಾಸಸೌಧ, ಬೆಂಗಳೂರು.
18. ಪ್ರಾಜೆಕ್ಟ್‌ಆಫೀಸರ್, ಹೆಚ್.ಆರ್.ಎಂ.ಎಸ್, ಕೊಠಡಿ ಸಂಖ್ಯೆ:145-ಎ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
19. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಕಬ್ಬನ್ ಉದ್ಯಾನವನ, ಬೆಂಗಳೂರು.
20. ಕರ್ನಾಟಕ ಸರ್ಕಾರ ಸಚಿವಾಲಯದ ಎಲ್ಲಾ ಶಾಖೆಗಳು.
21. ಕರ್ನಾಟಕ ಸರ್ಕಾರಿ ಸಚಿವಾಲಯದ ಗ್ರಂಥಾಲಯ; ವಿಧಾನ ಮಂಡಲದ ಗ್ರಂಥಾಲಯ.
22. ವಾರಪತ್ರ/ಶಾಖೆಯ ರಕ್ಷಾ ಕಡತ.

**[ಕ್ರಮ ಸಂಖ್ಯೆ:6 ರಿಂದ 18 ರವರೆಗೆ ನಮೂದಿತವಾದ ಅಧಿಕಾರಿಗಳಿಗೆ ಪತ್ರದ ಮೂಲಕ].**
**ಕರ್ನಾಟಕ ಸರ್ಕಾರದ ಅಧಿಕೃತ ಅಂತರ್ಜಾಲ ತಾಣ www.finance.kar.nic.in ವೀಕ್ಷಿಸಿ.**